<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.113/2023</u>

ದಿಃ 12.12.2024

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-12 Pw-11

| | | |
|---|---|---|
| ಹೆಸರು | ಃ | ಗುಡಿಯಯ್ಯ |
| ತಂದೆಯ ಹೆಸರು | ಃ | ಎಬ್ಬರಯ್ಯ |
| ವಯಸ್ಸು | ಃ | 64 ವರ್ಷ |
| ಉದ್ಯೋಗ | ಃ | ಕೂಲಿ ಕೆಲಸ |
| ವಾಸಸ್ಥಳ | ಃ | ಉಜ್ಜನಹಳ್ಳಿದೊಡ್ಡಿ, ಚನ್ನಪಟ್ಟಣ ತಾಲ್ಲೂಕು |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ನನಗೆ ಚಾಸಾ.1ರಿಂದ 11 ಮತ್ತು 13ರಿಂದ 17 ಗೊತ್ತು.

2. ಚಾಸಾ.1 ಮತ್ತು 2 ಇವರು ಹಿಂದೂ ಆದಿ ಕರ್ನಾಟಕ ಜಾತಿಗೆ ಸೇರಿದವರಾಗಿರುತ್ತಾರೆ.

3. ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳು ಹಿಂದೂ ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದು ನನಗೆ ಗೊತ್ತು.

4. ಆರೋಪಿತರಿಗೆ ಚಾಸಾ.1 ಮತ್ತು 2 ಇವರ ಜಾತಿ ಗೊತ್ತು.

5. ಈ ಪ್ರಕರಣದಲ್ಲಿ ನನಗೆ ಯಾವುದೇ ಘಟನೆಯ ಕುರಿತು ಗೊತ್ತಿರುವುದಿಲ್ಲ.

6. ಪೊಲೀಸರು ನನ್ನನ್ನು ಯಾವ ಕಾಲಕ್ಕೂ ಯಾವುದೇ ರೀತಿಯಲ್ಲಿ ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಿಲ್ಲ.

7. ನಂತರ, ದಿಃ04.11.2023 ರಂದು ಸಾಯಂಕಾಲ 4.30 ರಿಂದ 5.30 ರವರೆಗೆ ಚಾಸಾ.1 ಮತ್ತು 2 ಇವರ ತೋರಿಕೆಯ ಮೇರೆಗೆ ಪೊಲೀಸರು ಅವರ ಜಾಗದ ಹತ್ತಿರ ಭೇಟಿ ನೀಡಿ ಒಂದು ಸ್ಥಳ ಪಂಚನಾಮೆಯನ್ನು ಮಾಡಿ, ಅದರ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ.

8. ಸದರಿ ಸ್ಥಳ ಪಂಚನಾಮೆಯನ್ನು ಈಗ ನೋಡಿ ಗುರುತಿಸುತ್ತಿದ್ದು, ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ನನ್ನ ಸಹಿಯನ್ನು ಈಗ ನಿ.ಪಿ.2(ಎ) ಎಂದು ಗುರುತಿಸಲಾಯಿತು.

9. ಅದೇ ಸಮಯದಲ್ಲಿ ಈಗಾಗಲೇ ಗುರುತಿಸಲಾಗಿರುವ ನಿ.ಪಿ.3 ಮತ್ತು 4 ರಂತೆ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ.

10. ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಆದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

11. ಸದರಿ ಸ್ಥಳ ಪಂಚನಾಮೆಯನ್ನು ಪೊಲೀಸರು ದಿಃ11.04.2023 ರಂದು ಸಾಯಂಕಾಲ 4.00 ರಿಂದ 4.45 ರವರೆಗೆ ಮಾಡಿರುತ್ತಾರೆ ಎಂಬುದು ಸರಿ.

12. ಈಗ ನನಗೆ ಓದಿ ಹೇಳಿದ ನಿ.ಪಿ.11 ರಂತೆ, “ಉಜ್ಜನಹಳ್ಳಿ ಗ್ರಾಮದ ಸರ್ವೆ ನಂಬರ್.56/2 ರಲ್ಲಿ ಒಂದು ಎಕರೆ 6 ಗುಂಟೆ ಜಾಗದಲ್ಲಿ ನಮ್ಮ ಗ್ರಾಮದ ಎಲ್ಲಾರೂ ಮನೆಗಳನ್ನು ಕಟ್ಟಿಕೊಂಡು

.......................................

.......................................

.......................................

.......................................

ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ, ಆರೋಪಿಗಳನ್ನು ನೋಡಿದ್ದು ಮುಂದಿನ ದಿನಗಳಲ್ಲಿ ನೋಡಿದರೆ ಗುರುತಿಸುತ್ತೇನೆ“ ಎಂದು ದಿಃ15.04.2023 ರಂದು ಪೊಲೀಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆಂದು ಸೂಚಿಸುವುದು ಸರಿಯಲ್ಲ.

13. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ಎಸ್.ಎನ್.ಜಿ., ವಕೀಲರಿಂದ ಆರೋಪಿಗಳ ಪರವಾಗಿಃ

14. ನಿ.ಪಿ.2ರಲ್ಲಿ ಏನು ಬರೆದಿದೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

15. ನಿ.ಪಿ.2ರ ಮೇಲೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎನ್ನುವುದು ಸರಿಯಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.